ಖಾಸಗಿ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಹಲವಾರು ತಿಂಗಳುಗಳಿಂದ ಸಂಬಳ ನೀಡದಿರುವುದು.

೧೪೪೪. ಶ್ರೀ ಮಹಮದ್ ಲೈಕುದ್ದೀನ್ (ಬೀದರ್).—ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೀದರ್ ಜಿಲ್ಲೆಯ ಖಾಸಗೀ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಹಲವಾರು ತಿಂಗಳುಗಳಿಂದ ಸಂಬಳ ಕೊಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಇತರೆ ಜಿಲ್ಲೆಗಳಲ್ಲಿರುವ ಖಾಸಗೀ ಕಾಲೇಜುಗಳ ಸಿಬ್ಬಂದಿಗೆ ಸಂಬಳ ಕೊಡಲ್ಪಟ್ಟಿದೆಯೇ?

ಇ) ಹಾಗಿದ್ದಲ್ಲಿ ಬೀದರ್ ಜಿಲ್ಲೆಯ ಸಿಬ್ಬಂದಿಗೆ ಸಂಬಳವನ್ನು ಕೊಡದೆ ತಡೆಹಿಡಿಯಲು ಕಾರಣ ವೇನು ?

ಈ) ಯಾವಾಗ ಸದರೀ ಸಿಬ್ಬಂದಿಗಳಿಗೆ ಸಂಬಳವನ್ನು ಕೊಡಲಾಗುತ್ತದೆ ?

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಸಚಿವರು).—

ಅ) ಬಂದಿದೆ. ೧೯೮೭ನೇ ಡಿಸೆಂಬರ್ ತಿಂಗಳಿನಿಂದ ೧೯೮೮ನೇ ಫೆಬ್ರುವರಿ ತಿಂಗಳವರೆಗೆ ಸಂಬಳವನ್ನು ಬಿಡುಗಡೆ ಮಾಡಲು ತಡ ಆಯಿತು.

ಆ) ಆ ಅವಧಿಯಲ್ಲಿ ಇತರೆ ಜಿಲ್ಲೆಗಳ ಖಾಸಗಿ ಅನುದಾನಿತ ಕಾಲೇಜುಗಳ ಸಿಬ್ಬಂದಿಗೂ ಸಹ ಸಂಬಳವನ್ನು ಬಿಡುಗಡೆ ಮಾಡಲು ತಡವಾಯಿತು.

ಇ) ೧೯೮೭–೮೮ನೇ ಆರ್ಥಿಕ ವರ್ಷದ ಆಯವ್ಯಯದಲ್ಲಿ ಸಾಕಷ್ಟು ಹಣವನ್ನು ಒದಗಿಸದೇ ಇದ್ದ ಕಾರಣದಿಂದಾಗಿಯೂ ಹಾಗೂ ರಾಜ್ಯದ ಸಂಪನ್ಮೂಲ ಕಠಿಣವಾಗಿದ್ದ ಕಾರಣದಿಂದಾಗಿಯೂ, ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗೆ ಸಂಬಳ ಬಿಡುಗಡೆ ಮಾಡಲು ತಡವಾಯಿತು.

ಈ) ಈಗ ಕಾಲಕಾಲಕ್ಕೆ ಸರಿಯಾಗಿ ಸಂಬಳವನ್ನು ನೀಡಲಾಗಿದೆ.

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ೫೫ ಜಂಟಿ ನಿರ್ದೇಶಕರ ಹುದ್ದೆಗಳನ್ನು ಸೃಷ್ಟಿಸುವುದು

೧೪೪೫. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಾಲೇಜು ಶಿಕ್ಷಣ ಇಲಾಖೆಯಲ್ಲಿ ೫೫ ಜಂಟಿ ನಿರ್ದೇಶಕರ ಹುದ್ದೆಗಳನ್ನು ಸೃಷ್ಟಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ ?

ಆ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಸೃಷ್ಟಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು ?

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಸಚಿವರು).—

ಅ) ಸಧ್ಯದಲ್ಲಿ ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಅಧ್ಯಕ್ಷರು.—ಇಲ್ಲಿಗೆ ಪ್ರಶ್ನೋತ್ತರಗಳ ವೇಳೆ ಮುಕ್ತಾಯವಾಯಿತು. ಈಗ ಲಿಖಿತ ಮೂಲಕ ಉತ್ತರಿಸಲಾಗುವ ಪ್ರಶ್ನೆಗಳ ಪಟ್ಟಿಯನ್ನು ಸಭೆಯ ಮುಂದೆ ಪಂಡಿಸುವುದು,